ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಲೋಕಸಭೆ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 03/03/2020

## ನಾಮಪತ್ರದಲ್ಲಿ ತಪ್ಪು ಮಾಹಿತಿ: ಪ್ರಜ್ವಲ್‌ಗೆ ಸುಪ್ರೀಂ ನೋಟಿಸ್

ನವದೆಹಲಿ: ಹಾಸನದ ಸಂಸದ ಪ್ರಜ್ವಲ್ ರೇವಣ್ಣ ಲೋಕ ಸಭಾ ಚುನಾವಣಾ ನಾಮಪತ್ರ ಸಲ್ಲಿಕೆ ವೇಳೆ ತಪ್ಪು ಮಾಹಿತಿ ನೀಡಿದ್ದಾರೆಂಬ ಅಲ್ಲಿನ ಪ್ರಾಜಿತ ಅಭ್ಯರ್ಥಿ ಎ.ಮಂಜು ಸಲ್ಲಿಸಿದ್ದ ಅರ್ಜಿಗೆ ಸಂಬಂಧಿಸಿ ಪ್ರಜ್ವಲ್ ರೇವಣ್ಣ ಅವರಿಗೆ ಸುಪ್ರೀಂ ಕೋರ್ಟ್ ನೋಟೀಸ್ ನೀಡಿದೆ. ತಮ್ಮ ಅರ್ಜಿ ವಜಾಗೊಳಿಸಿದ್ದ ಹೈಕೋರ್ಟ್ ಕ್ರಮವನ್ನು ಪ್ರಶ್ನಿಸಿ ಎ. ಮಂಜು ಸಲ್ಲಿಸಿದ್ದ ಅರ್ಜಿಯನ್ನು ಸೋಮವಾರ ವಿಚಾರಣೆಗೆ ಕೈಗೆತ್ತಿಕೊಂಡ ಸುಪ್ರೀಂನ ಮುಖ್ಯ ನ್ಯಾ. ಎಸ್.ಎ.ಬೋಬ್ಡೆ, ನ್ಯಾ| ಬಿ.ಆರ್.ಗವಾಯಿ, ನ್ಯಾ| ಸೂರ್ಯಕಾಂತ ಅವರನ್ನು ಒಳಗೊಂಡ ತ್ರಿಸದಸ್ಯ ನ್ಯಾಯಪೀಠವು ಪ್ರಜ್ವಲ್ ರೇವಣ್ಣ ಅವರಿಗೆ ನೋಟಿಸ್ ನೀಡಿದ್ದು, ನಾಲ್ಕು ವಾರದೊಳಗೆ ಪ್ರತಿಕ್ರಿಯಿಸುವಂತೆ ಸೂಚಿಸಿದೆ.